CW.3 PW.2

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.417/2020

| | |
|---|---|
| ಸಾಕ್ಷಿದಾರರ ಹೆಸರು | ನಿತೀಶ್ ಎಂ |
| ತಂದೆಯ ಹೆಸರು | ಮಾದೇಶ್ |
| ವಯಸ್ಸು | 21 ವರ್ಷ |
| ವೃತ್ತಿ | ಎಂ ಬಿ ಎ ವ್ಯಾಸಾಂಗ |
| ವಿಳಾಸ | ಹುಣಸನಹಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 09.03.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿ ನನ್ನ ತಂದೆ. ಚಾಸಾ-1 ನನ್ನ ತಾಯಿ. ಚಾಸಾ-2 ರವರು ನನ್ನ ಅಜ್ಜಿ. ಚಾಸಾ-4 ರವರು ಗೊತ್ತಿರುತ್ತಾರೆ.

ಆರೋಪಿ ಚಾಸಾ-1 ರವರಿಗೆ ಯಾವುದೇ ರೀತಿಯ ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡಿರುವುದಿಲ್ಲ. ನನಗೆ ಮತ್ತು ಚಾಸಾ-1 ಮತ್ತು 2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಜೀವ ಬೆದರಿಕೆ ಹಾಕಿರುವುದಿಲ್ಲ. ನಾನು ಈ ಸಂಬಂಧ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ಪಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

CW.3 PW.2

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 22.12.2019 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ದಾಖಲೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ನಾವು ಮತ್ತು ಆರೋಪಿ ರಾಜಿ ಮಾಡಿಕೊಂಡಿರುತ್ತೇವೆಂನದರೆ ಸರಿ. ಆದ್ದರಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**